ಕರ್ನಾಟಕ ಸರ್ಕಾರ

# ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ನಂ.17, ವಾರ್ತಾ ಸೌಧ, ಭಗವಾನ್ ಮಹಾವೀರ ರಸ್ತೆ ಬೆಂಗಳೂರು 560 001.
ದೂ. 080-22028032/34/ಫ್ಯಾಕ್ಸ್ 22028041

ದಿನಾಂಕ : 04-03-2015

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಚರ್ಮೋದ್ಯೋಗದಲ್ಲಿ ಕೌಶಲ್ಯವೃದ್ಧಿ ತರಬೇತಿ ಪಡೆದ ಕುಶಲಕರ್ಮಿಗಳಿಗೆ ಅರ್ಹತಾ ಪತ್ರ ವಿತರಣೆ ಹಾಗೂ ಅಧ್ಯಯನ ಪ್ರವಾಸ ಕಾರ್ಯಕ್ರಮ: ಉದ್ಘಾಟನೆ: ಶ್ರೀ ಹೆಚ್. ಆಂಜನೇಯ, ಸಮಾಜ ಕಲ್ಯಾಣ ಸಚಿವರು, | 05-03-2015 ಗುರುವಾರ ಬೆಳಿಗ್ಗೆ 10-00 ಗಂಟೆಗೆ | ಬಿ.ಆರ್. ಅಂಬೇಡ್ಕರ್ ಭವನ, ಮಿಲ್ಲರ್ ರಸ್ತೆ, ವಸಂತನಗರ, ಬೆಂಗಳೂರು – 560 002 |
| 2. | ಪತ್ರಿಕಾಗೋಷ್ಠಿ ಹಾಗೂ ಸಕಾಲ ಸೇವೆಗಳ ವರದಿ ಸಂಚಿಕೆಗಳ ಬಿಡುಗಡೆ ಶ್ರೀ ಟಿ.ಬಿ. ಜಯಚಂದ್ರ, ಕಾನೂನು ಸಂಸದೀಯ ವ್ಯವಹಾರಗಳು, ಪಶುಸಂಗೋಪನೆ ಮತ್ತು ಮುಜರಾಯಿ ಸಚಿವರು. | 05-03-2015 ಗುರುವಾರ ಬೆಳಿಗ್ಗೆ 11-00 ಗಂಟೆಗೆ | ಕೊಠಡಿ ಸಂಖ್ಯೆ 222, 2 ನೇ ಮಹಡಿ, ವಿಕಾಸಸೌಧ, ಬೆಂಗಳೂರು. |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

## ಅರ್ಹತಾ ಪತ್ರ ವಿತರಣೆ, ಅಧ್ಯಯನ ಪ್ರವಾಸ ಕಾರ್ಯಕ್ರಮ

ಬೆಂಗಳೂರು, ಮಾರ್ಚ್ 4 (ಕರ್ನಾಟಕ ವಾರ್ತೆ)

ಡಾ. ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ವತಿಯಿಂದ ದಿನಾಂಕ 5-3-2015 ರಂದು ಬೆಳಿಗ್ಗೆ 10-00 ಗಂಟೆಗೆ ಡಾ. ಬಿ.ಆರ್. ಅಂಬೇಡ್ಕರ್ ಭವನ, ಮಿಲ್ಲರ್ ರಸ್ತೆ, ಬೆಂಗಳೂರು ಇಲ್ಲಿ ಚರ್ಮೋದ್ಯೋಗದಲ್ಲಿ ಕೌಶಲ್ಯವೃದ್ಧಿ ತರಬೇತಿ ಪಡೆದ ಕುಶಲಕರ್ಮಿಗಳಿಗೆ ಅರ್ಹತಾ ಪತ್ರ ವಿತರಣೆ ಹಾಗೂ ಅಧ್ಯಯನ ಪ್ರವಾಸ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.

ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಶ್ರೀ ಹೆಚ್. ಆಂಜನೇಯ, ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ನಂತರ ಫಲಾನುಭವಿಗಳಿಗೆ ಅರ್ಹತಾ ಪತ್ರಗಳನ್ನು ವಿತರಿಸಲಿದ್ದಾರೆ. ನಿಗಮದ ಅಧ್ಯಕ್ಷ ಶ್ರೀ ಆರ್. ರಾಮಕೃಷ್ಣ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಸಮಾಜ ಕಲ್ಯಾಣ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಶ್ರೀ ಎನ್. ಮಂಜುನಾಥ್ ಪ್ರಸಾದ್, ಸಮಾಜ ಕಲ್ಯಾಣ ಇಲಾಖೆ ಆಯುಕ್ತರಾದ ಶ್ರೀಮತಿ ಎಂ.ವಿ. ಸಾವಿತ್ರಿ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿರುವರು.
ಬಾಬು:ಜಿಪಿಆರ್.

**ಛಾಯಾಚಿತ್ರ ಶೀರ್ಷಿಕೆ:**

ಪೌರಾಡಳಿತ ನಿರ್ದೇಶನಾಲಯವನ್ನು ಆಯುಕ್ತಾಲಯವನ್ನಾಗಿ ಮೇಲ್ದರ್ಜೆಗೇರಿಸುವಿಕೆಗೆ ಶಿಫಾರಸ್ಸು ಮಾಡಲು ಸರ್ಕಾರ ನೇಮಿಸಿದ್ದ ಸಮಿತಿಯ ಅಧ್ಯಕ್ಷ ಶ್ರೀ ಜ್ಯೋತಿರಾಮಲಿಂಗಂ, ಹಾಗೂ ಸದಸ್ಯರುಗಳು ದಿನಾಂಕ:03.03.2015ರಂದು ಸಮಿತಿಯ ಅಂತಿಮ ವರದಿಯನ್ನು ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಹಾಗೂ ಪೌರಾಡಳಿತ ಸಚಿವರು ಹಾಗೂ ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರ ಸಮ್ಮುಖದಲ್ಲಿ ಮುಖ್ಯಮಂತ್ರಿಗಳಿಗೆ ಹಸ್ತಾಂತರಿಸಿದರು.